ತೆಗೆದುಕೊಂಡಿದ್ದು, ಇನ್ನೂ ಕೆಲವರು ತೆಗೆದುಕೊಳ್ಳದೆ ಇದ್ದುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅಂಥ ಹಕ್ಕುದಾರರಿಗೆ ಈಗಲಾದರೂ ಪ್ರಸ್ತುತ ನಿಯಮಗಳ ಪ್ರಕಾರ ನಿಗಧಿತ ಬೆಲೆ ಕಟ್ಟಿಸಿಕೊಂಡು ನಿವೇಶನ ಕೊಡುವ ಕ್ರಮ ಜರುಗಿಸುವರೆ;

ಇ) ತಮ್ಮ ನಿವೇಶನವನ್ನು ಕಳೆದುಕೊಂಡು ಕಾನೂನುನನ್ನು ಗೌರವಿಸಿದ ಹಕ್ಕುದಾರರಿಗೆ ಕೂಡಲೇ ಘೋಷಿತ ನೂತನ ಬಡಾವಣೆಯಲ್ಲಿ ನಿವೇಶನ ಕೊಡಲು ವ್ಯವಸ್ಥೆ ಮಾಡಲಾಗುವುದೇ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು):

ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕಾಯ್ದೆ ಮತ್ತು ನಿಯಮಾವಳಿಗಳಲ್ಲಿ ರೆವಿನ್ಯೂ ನಿವೇಶನದಾರರಿಗೆ ಬದಲೀ ನಿವೇಶನ ನೀಡಲು ಅವಕಾಶವಿರುವುದಿಲ್ಲ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ : 23433-549:01 ದಿ:20-7-2001 ಹಾಗೂ ಇನ್ನಿತರ ಪ್ರಕರಣಗಳಲ್ಲಿ ನೋಂದಾಯಿತ ಕ್ರಯದ ಮೂಲಕ ರೆವಿನ್ಯೂ ನಿವೇಶನ ಖರೀದಿಸಿರುವವರಿಗೆ ಹಂಚಿಕೆ ದರದಲ್ಲಿ ನಿವೇಶನ ಹಂಚಿಕೆ ಮಾಡಲು ನೀಡಿರುವ ನಿರ್ದೇಶನವನ್ನು ಪಾಲಿಸಲಾಗುತ್ತಿದೆ.

ಆ) ಪರಿಹಾರ ಧನವನ್ನು ಭೂಸ್ವಾಧೀನ ಕಾಯ್ದೆ 30 31 (2) ರನ್ವಯ ನ್ಯಾಯಲಯಕ್ಕೆ ಕಳುಹಿಸಿರುವುದರಿಂದ ಮತ್ತು ನ್ಯಾಯಲಯವೇ ಪರಿಹಾರ ಹಣವನ್ನು ಪಾವತಿ ಮಾಡುವುದರಿಂದ ಪರಿಹಾರ ಧನ ಪಡೆದವರ ಮತ್ತು ಪಡೆಯದವರ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಮೇಲೆ ತಿಳಿಸಿರುವ ಉಚ್ಚ ನ್ಯಾಯಾಲಯದ ತೀರ್ಪು 2001ರ ಹಿಂದಿನ ಪ್ರಕರಣಗಳಿಗೆ ಅನ್ವಯಿಸುವುದಿಲ್ಲ.

ಇ) ಇಂತಹ ಹುಯಿಲುಗಳಿಗೆ ನಿಯಮಗಳಲ್ಲಿ ಅವಕಾಶ ವಿರುವುದಿಲ್ಲ.

ಕೊಪ್ಪಳದಲ್ಲಿ ಟ್ರಾಫಿಕ್ ಪೊಲೀಸ್ ಠಾಣೆ ಪ್ರಾರಂಭಿಸುವುದು

2075 (2400) - ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ): ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ಜಿಲ್ಲಾ ಕೇಂದ್ರ ಬಿಂದುವಾಗಿದ್ದು, ಅಲ್ಲಿ ಒಂದು ಟ್ರಾಫಿಕ್ ಪೊಲೀಸ್ ಠಾಣೆಯನ್ನು ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರ ಮುಂದೆ ಇದೆಯೇ?

ಆ) ಇದ್ದರೆ ಸದರಿ ಠಾಣೆಯನ್ನು ಯಾವಗಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಶಿವಾಜಿನಗರ ಬಸ್ ನಿಲ್ದಾಣದ ಸುತ್ತಮುತ್ತಲಿನ ರಸ್ತೆಗಳನ್ನು ಕಾಂಕ್ರಿಟ್ ರಸ್ತೆಗಳನ್ನಾಗಿ ಪರಿವರ್ತಿಸುವುದು

2077 (2234) - ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ): ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ಶಿವಾಜಿನಗರ ಬಸ್ ನಿಲ್ದಾಣದ ಸುತ್ತಮುತ್ತಲಿನ ರಸ್ತೆಗಳನ್ನು ಕಾಂಕ್ರೀಟ್ ರಸ್ತೆಗಳನ್ನಾಗಿ ಪರಿವರ್ತಿಸಲು ಕಳೆದ ಎರಡು ವರ್ಷಗಳ ಹಿಂದೆ ಸರ್ಕಾರ ಹೇಳಿಕೆ ನೀಡಿದ್ದು ನಿಜವಲ್ಲವೇ?

ಅ) ಹಾಗಿದ್ದಲ್ಲಿ ಇಲ್ಲಿಯವರೆಗೆ ಈ ಕಾಮಗಾರಿಯನ್ನು ಕೈಗೊಳ್ಳಲದೇ ಇರಲು ಕಾರಣಗಳೇನು?

ಇ) ಇದಕ್ಕಾಗಿ ಖರ್ಚಾಗಿರುವ ಹಣವೆಷ್ಟು?

ಈ) ಈ ಕಾಮಗಾರಿಯನ್ನು ಕೂಡಲೇ ಕೈಗೊಳ್ಳುವ ಸರ್ಕಾರ ಸಂಬಂಧಪಟ್ಟವರಿಗೆ ಆದೇಶಿಸುತ್ತದೆಯೇ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು):

ಅ) ಹೌದು.

ಆ) ಡಾಂಬರು ಮೇಲ್ಪೈ ದುರಸ್ತಿ ಮಾಡಲಾಗಿದ್ದು, ವಾಹನಗಳು ತೊಂದರೆ ಇಲ್ಲದೆ ಸಂಚರಿಸುತ್ತಿವೆ.

ಇ) ರೂ. 40.00 ಲಕ್ಷಗಳು

ಈ) ಡಾಂಬರು ಮೇಲ್ಪೈ ತೃಪ್ತಿಕರ ಸ್ಥಿತಿಯಲ್ಲಿರುವುದರಿಂದ, ಈ ಬಗ್ಗೆ ಇನ್ನೂ ಕೆಲವು ತಿಂಗಳ ನಂತರ ಕ್ರಮ ತೆಗೆದುಕೊಳ್ಳಲಾಗುವುದು.

ಬೆಂಗಳೂರಿನ ಕ್ವೀನ್ಸ್ ರಸ್ತೆ ಹಾಗೂ ವಿಷನ್ ರಸ್ತೆಗಳಲ್ಲಿ ಏಕಮುಖ ಸಂಚಾರಕ್ಕೆ ವ್ಯವಸ್ಥೆ ಮಾಡಿರುವುದರಿಂದ ಸಾರ್ವಜನಿಕರಿಗೆ ತೊಂದರೆ

2078 (2235) - ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ): ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ಕ್ವೀನ್ಸ್ ರಸ್ತೆ ಹಾಗೂ ಮಿಷನ್ ರಸ್ತೆಗಳಲ್ಲಿ ಏಕಮುಖ ಸಂಚಾರಕ್ಕೆ ವ್ಯವಸ್ಥೆ ಮಾಡಿರುವುದರಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕ್ವೀನ್ಸ್ ರಸ್ತೆಯಿಂದ ಶಿವಾಜಿನಗರಕ್ಕೆ ಹೋಗಿ ವಿಧಾನಸೌಧ ಕಡೆಗೆ ವಾಹನಗಳು ಸಂಚರಿಸಬೇಕಾಗಿರುವುದರಿಂದ, ಈ ರಸ್ತೆಗಳಲ್ಲಿ ವಾಹನಗಳ ಒತ್ತಡ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ರಸ್ತೆಗಳಲ್ಲಿನ ಏಕಮುಖ ಸಂಚಾರ ವ್ಯವಸ್ಥೆಯನ್ನು ರದ್ದುಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು):

ಅ) ಇಲ್ಲ.

ಆ) ಸಂಚಾರ ತಜ್ಞರಿಂದ ಏಕಮುಖ ಸಂಚಾರ ವ್ಯವಸ್ಥೆ ಬಗ್ಗೆ ಕೂಲಂಕುಷವಾಗಿ ಅಭ್ಯಾಸ ನಡೆಸಿ, ತಜ್ಞರ ಅಭಿಪ್ರಾಯದ ಮೇರೆಗೆ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಏಕಮುಖ ಸಂಚಾರ ವ್ಯವಸ್ಥೆ ಏರ್ಪಡಿಸಲಾಗಿರುತ್ತದೆ. ಇದರಿಂದ ಆ ರಸ್ತೆಗಳಲ್ಲಿ ವಾಹನಗಳ ಒತ್ತಡ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಇ) ಸಾರ್ವಜನಿಕರ ಹಿತದೃಷ್ಟಿ ಮತ್ತು ಅಪಘಾತಗಳನ್ನು ತಪ್ಪಿಸುವ ದೃಷ್ಟಿಯಿಂದ ಹಾಗೂ ಸುಗಮ ಸಂಚಾರ ವ್ಯವಸ್ಥೆಯನ್ನು ಏರ್ಪಡಿಸುವ ಸಲುವಾಗಿ ಏಕಮುಖ ಸಂಚಾರ ವ್ಯವಸ್ಥೆಯನ್ನು ಜಾರಿಗೆ ತಂದಿದ್ದು, ಅದನ್ನು ರದ್ದುಗೊಳಿಸುವ ಪ್ರಸ್ತಾವನೆ ಇರುವುದಿಲ್ಲ.